ಜೆಎಸ್‌ಎಸ್ ಮಹಾವಿದ್ಯಾಪೀಠ



# ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ

ಸುತ್ತೂರು ಶ್ರೀಕ್ಷೇತ್ರ, ಮೈಸೂರು ಜಿಲ್ಲೆ

## ರಜತ ಮಹೋತ್ಸವ ಉದ್ಘಾಟನೆ

**11 ಜನವರಿ 2020 * ಶನಿವಾರ * ಮಧ್ಯಾಹ್ನ 3.00**

ದಿವ್ಯಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

ಉದ್ಘಾಟನೆ

**ಶ್ರೀ ಎಸ್. ಸುರೇಶ್ ಕುಮಾರ್**

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು

ಅಧ್ಯಕ್ಷತೆ

**ಶ್ರೀ ಯತೀಂದ್ರ ಸಿದ್ಧರಾಮಯ್ಯ**

ವಿಧಾನಸಭಾ ಸದಸ್ಯರು

ಮುಖ್ಯ ಅತಿಥಿಗಳು

**ಶ್ರೀ ಪಿ. ಶೇಷಾದ್ರಿ**

ರಾಷ್ಟ್ರಪ್ರಶಸ್ತಿ ಪುರಸ್ಕೃತ ಚಲನಚಿತ್ರ ನಿರ್ದೇಶಕರು

ತಮಗೆಲ್ಲ ಪ್ರೀತಿಪೂರ್ವಕ ಸ್ವಾಗತ

ಸಂಜೆ : 6.30 ಮೋಹನದಾಸ – ಚಲನಚಿತ್ರ ಪ್ರದರ್ಶನ

ಆಡಳಿತ ವರ್ಗ, ಶಾಲಾ ಮುಖ್ಯಸ್ಥರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು

ಕಪಿಲಾ ನದಿತೀರದಲ್ಲಿರುವ ಸುತ್ತೂರು ಶ್ರೀಕ್ಷೇತ್ರವನ್ನು ತಮ್ಮ ತಪಸ್ಸಿದ್ಧಿಯಿಂದ ಜಾಗೃತ ಧರ್ಮಕ್ಷೇತ್ರವನ್ನಾಗಿ ನೆಲೆಗೊಳಿಸಿದ ಮಹಾಮಹಿಮರು ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರು. ಪೂಜ್ಯರು ಸಂಸ್ಥಾಪಿಸಿದ ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠವು ಸಹಸ್ರಾರು ವರ್ಷಗಳಿಂದ ಸಮುದಾಯದ ಸಮಗ್ರ ಉನ್ನತಿಗಾಗಿ ಜ್ಞಾನಾನ್ನದಾಸೋಹಗಳ ಕೈಂಕರ್ಯವನ್ನು ನಡೆಸುತ್ತಾ ಬಂದಿದೆ. ಇಂಥ ಭವ್ಯ ಇತಿಹಾಸವುಳ್ಳ ಶ್ರೀಮಠದ ಎಲ್ಲ ಪೂಜ್ಯ ಜಗದ್ಗುರುಗಳು ತಮ್ಮ ಅನುಪಮ ತಪೋನುಷ್ಠಾನದಿಂದ ಲೋಕೋದ್ಧಾರದ ಸೇವಾಕಾರ್ಯಗಳನ್ನು ಕೈಗೊಂಡಿದ್ದಾರೆ.

ಶ್ರೀಮಠದ ಬಹುಮುಖ ಚಟುವಟಿಕೆಗಳ ನಿರ್ವಹಣೆಗಾಗಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರಿಂದ ಸ್ಥಾಪಿತವಾದ ಜೆಎಸ್‌ಎಸ್ ಮಹಾವಿದ್ಯಾಪೀಠದ ಮೂಲಕ ದೇಶ–ವಿದೇಶಗಳಲ್ಲಿ ಧರ್ಮ, ಸಂಸ್ಕೃತಿ, ಶಿಕ್ಷಣ, ಆರೋಗ್ಯ, ಕೃಷಿ, ಗ್ರಾಮೀಣಾಭಿವೃದ್ಧಿ, ಸಮಾಜ ಸುಧಾರಣೆ ಮುಂತಾದ ಕ್ಷೇತ್ರಗಳಲ್ಲಿ ನಿರಂತರವಾಗಿ ಸೇವಾಕಾರ್ಯಗಳು ನಡೆಯುತ್ತಿವೆ.

ಪೂಜ್ಯ ರಾಜೇಂದ್ರ ಶ್ರೀಗಳು 1962ರಲ್ಲಿ ಸುತ್ತೂರು ಶ್ರೀಕ್ಷೇತ್ರದಲ್ಲಿ ಪ್ರೌಢಶಾಲೆಯನ್ನು ಸ್ಥಾಪಿಸುವ ಮೂಲಕ ಗ್ರಾಮೀಣ ಭಾಗದ ಸಹಸ್ರಾರು ವಿದ್ಯಾರ್ಥಿಗಳ ಉನ್ನತಿಗೆ ಕಾರಣೀಭೂತರಾಗಿದ್ದಾರೆ. ಪೂಜ್ಯರು ಅಂದು ಹಚ್ಚಿದ ಜ್ಞಾನದ ಸೊಡರು ಇಂದು ಸುತ್ತೂರು ಸಿರಿಯಾಗಿ ಸುವರ್ಣ ಸೌರಭ ಸೂಸುತ್ತಿದೆ.

ಹಿರಿಯ ಶ್ರೀಗಳವರ ಸಂಕಲ್ಪದಂತೆ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರಿಂದ 1991ರಲ್ಲಿ ಸುತ್ತೂರಿನ ಶ್ರೀಮಠದ ಆವರಣದಲ್ಲಿ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ ಪ್ರಾರಂಭವಾಯಿತು. 2001ರಲ್ಲಿ ಪ್ರಾಥಮಿಕ ಶಾಲೆಯು ಪ್ರೌಢಶಾಲೆಯೊಂದಿಗೆ ಈಗಿನ ಭವ್ಯ ಕಟ್ಟಡಕ್ಕೆ ಸ್ಥಳಾಂತರಗೊಂಡಿತು.

ಪ್ರಸ್ತುತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1 ರಿಂದ 7ನೇ ತರಗತಿವರೆಗೆ 2000ಕ್ಕೂ ಹೆಚ್ಚು ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ಕರ್ನಾಟಕ, ನೆರೆ ರಾಜ್ಯಗಳು, ಮಣಿಪುರ, ಮೇಘಾಲಯ, ಜಾರ್ಖಂಡ್ ಹಾಗೂ ಹಿಮಾಚಲಪ್ರದೇಶ ಮುಂತಾದ ರಾಜ್ಯಗಳ ವಿದ್ಯಾರ್ಥಿಗಳಿದ್ದಾರೆ. ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳಲ್ಲಿ ವ್ಯಾಸಂಗಕ್ಕೆ ಅವಕಾಶವಿದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡೆ ಹಾಗೂ ಇತರ ಚಟುವಟಿಕೆಗಳ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಇದೀಗ ರಜತಮಹೋತ್ಸವ (ಬೆಳ್ಳಿಹಬ್ಬ) ದ ಸಂಭ್ರಮಾಚರಣೆಯಲ್ಲಿದೆ.

